RNU AIR DHARWAD

# APRIL 08 2026
# AKASHAVANI - DHARWAD
# PRADESH SAAMACHARA (KANNADA) 07.05 A.M

<><><>

**ರಸ್ತೆ ಬದಿ ವ್ಯಾಪಾರಿಗಳಿಂದ** ಹಿಡಿದು ಸಣ್ಣ ಕೈಗಾರಿಕೆಗಳವರೆಗೆ, ಮುದ್ರಾ ಯೋಜನೆಯು ತಳಮಟ್ಟಕ್ಕೆ ಸಾಂಸ್ಥಿಕ ಸಾಲವನ್ನು ತಲುಪಿಸುವ ಮೂಲಕ ಆತ್ಮನಿರ್ಭರ ಭಾರತದ ಅಡಿಪಾಯವನ್ನು ಬಲಪಡಿಸುತ್ತಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ್ ಜೋಶಿ ಹೇಳಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಪ್ರಧಾನಮಂತ್ರಿ ನರೇಂದ್ರ ಮೋದಿ ಅವರ ದೂರದೃಷ್ಟಿ ನಾಯಕತ್ವದಲ್ಲಿ ಪ್ರಧಾನ್ ಮಂತ್ರಿ ಮುದ್ರಾ ಯೋಜನೆಯು ಸಾಂಸ್ಥಿಕ ಸಾಲದ ಲಭ್ಯತೆಯನ್ನು ಅಭೂತಪೂರ್ವ ಮಟ್ಟದಲ್ಲಿ ವಿಸ್ತರಿಸಿದೆ. ದೇಶಾದ್ಯಂತ 40 ಲಕ್ಷ ಕೋಟಿ ಮೌಲ್ಯದ 58 ಕೋಟಿ ಮುದ್ರಾ ಸಾಲಗಳನ್ನು ವಿತರಿಸಲಾಗಿದ್ದು, ಸಣ್ಣ ಉದ್ಯಮಿಗಳು ತಮ್ಮ ವ್ಯವಹಾರಗಳನ್ನು ಪ್ರಾರಂಭಿಸಲು, ನಿರ್ವಹಿಸಲು ಮತ್ತು ವಿಸ್ತರಿಸಲು ಶಕ್ತಿ ನೀಡುತ್ತಿದೆ ಎಂದಿದ್ದಾರೆ.

<><><>

**ಪ್ರವಾಸಿಗರ ಅನುಕೂಲಕ್ಕಾಗಿ** MSIL-Mysore sales International Limited ವತಿಯಿಂದ ಶೀಘ್ರದಲ್ಲೇ ನೂತನ ಆ್ಯಪ್ ಲೋಕಾರ್ಪಣೆಗೊಳಿಸಲಾಗುವುದು ಎಂದು ಬೃಹತ್ ಹಾಗೂ ಮಧ್ಯಮ ಕೈಗಾರಿಕೆ ಖಾತೆ ಸಚಿವ ಎಮ್.ಬಿ.ಪಾಟೀಲ್ ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದಲ್ಲಿ ಮಾಹಿತಿ ಹಂಚಿಕೊಂಡಿರುವ ಅವರು, ಡಿಜಿಟಲ್ ಯುಗಕ್ಕೆ ತಕ್ಕಂತೆ ಸಾರಿಗೆ, ಮಾಹಿತಿ ಮತ್ತು ಅಗತ್ಯ ಸೇವೆಗಳನ್ನು ಪ್ರವಾಸಿಗರ ಕೈಗೆ ತಲುಪಿಸುವ ಮೂಲಕ, ಈ ಉಪಕ್ರಮವು ಸುಗಮ, ವೇಗವಾದ ಮತ್ತು ವಿಶ್ವಾಸಾರ್ಹ ಪ್ರಯಾಣಕ್ಕೆ ಹೊಸ ದಾರಿಯನ್ನು ರೂಪಿಸಲಿದೆ. ಇಂತಹ ಸ್ಮಾರ್ಟ್ ತಂತ್ರಜ್ಞಾನದ ಬಳಕೆಯು ನಮ್ಮ ರಾಜ್ಯವನ್ನು ಡಿಜಿಟಲ್ ನಾಯಕತ್ವದತ್ತ ಮುನ್ನಡೆಸುವಲ್ಲಿ ಪ್ರಮುಖ ಪಾತ್ರ ವಹಿಸಲಿದೆ ಎಂದಿದ್ದಾರೆ.

<><><>

**ವಿಜ್ಞಾನವನ್ನು ಗ್ರಾಮೀಣ ಮಕ್ಕಳ** ಬದುಕಿಗೆ ಮತ್ತಷ್ಟು ಹತ್ತಿರವಾಗಿಸುವ ನಿಟ್ಟಿನಲ್ಲಿ, ವಿಜ್ಞಾನದ ಬಗ್ಗೆ ಕುತೂಹಲವನ್ನು ಮೂಡಿಸುವ ಉದ್ದೇಶದಿಂದ ಎಲ್ಲಾ ಜಿಲ್ಲೆಗಳಲ್ಲೂ ವಿಜ್ಞಾನ ಕೇಂದ್ರಗಳನ್ನು ನಿರ್ಮಿಸಲು ರಾಜ್ಯ ಸರ್ಕಾರ ಮುಂದಾಗಿದೆ ಎಂದು ವಿಜ್ಞಾನ ಮತ್ತು ತಂತ್ರಜ್ಞಾನ ಖಾತೆ ಸಚಿವ ಎನ್.ಎಸ್.ಭೋಸರಾಜು ತಿಳಿಸಿದ್ದಾರೆ. ಈ ಕುರಿತು ಸಾಮಾಜಿಕ ಮಾಧ್ಯಮದ ಮೂಲಕ ಮಾಹಿತಿ ನೀಡಿರುವ ಅವರು, ಮಂಗಳೂರಿನ ಪಿಲಿಕುಳದಲ್ಲಿ ಕರಾವಳಿಯ ಕಲೆ ಸಂಸ್ಕೃತಿ ಹಾಗೂ ಪರಂಪರೆಯ ದರ್ಶನದ ಜೊತೆಗೆ ವಿಜ್ಞಾನ ತಂತ್ರಜ್ಞಾನ ಮತ್ತು ಖಗೋಳಶಾಸ್ತ್ರವನ್ನು ಪರಿಚಯಿಸುವಲ್ಲಿ ಯಶಸ್ವಿಯಾಗಿದೆ ಎಂದಿದ್ದಾರೆ.

<><><>

**ಏಪ್ರೀಲ್ 16 ರಿಂದ ಮೇ 16** ರವರೆಗೆ ಮನೆಮನೆ ಜನಗಣತಿ ಕಾರ್ಯ ನಡೆಯಲಿದೆ. ನಿಗದಿತ ಅವಧಿಯೊಳಗೆ ಗಣತಿ ಕಾರ್ಯ ಪೂರ್ಣಗೊಳಿಸಬೇಕು ಎಂದು ಧಾರವಾಡ ಜಿಲ್ಲಾಧಿಕಾರಿ ಸ್ನೇಹಲ್ ಆರ್. ಹೇಳಿದ್ದಾರೆ. ಹುಬ್ಬಳ್ಳಿ ನಗರದ ಲ್ಯಾಮಿಂಗ್ಟನ್ ಶಾಲೆಯ ಜನಗಣತಿಯ ಗಣತಿದಾರರ ತರಬೇತಿ ಕಾರ್ಯಾಗಾರ ಕೇಂದ್ರಕ್ಕೆ ಭೇಟಿ ನೀಡಿ, ನಂತರ ಮಾತನಾಡಿದ ಅವರು, ಬೇರೆ ಊರುಗಳಿಗೆ ತೆರಳಿದ ಜನರ ಮಾಹಿತಿಯು ಪುನರಾವರ್ತನೆ ಆಗದಂತೆ, ಯಾವುದೇ ಮನೆಗಳು ಗಣತಿ ಕಾರ್ಯದಿಂದ ಹೊರಗುಳಿಯದಂತೆ, ಜನರಿಂದ ದೂರುಗಳು ಬರದಂತೆ ಗಣತಿ ಕಾರ್ಯ ನಿರ್ವಹಿಸಬೇಕು. ಮನೆಗಳ ಗಣತಿ ಕಾರ್ಯದ ಕುರಿತು ಜನರಿಗೆ ಅರಿವು ಮೂಡಿಸಬೇಕು ಎಂದರು.

<><><>

**ನಾರಿ ಶಕ್ತಿ ವಂದನಾ ಅಭಿಯಾನದ ಮೂಲಕ ಮಹಾತ್ಮಾ ಗಾಂಧೀಜಿಯವರ** ಕನಸು ಸಾಕಾರವಾಗುತ್ತಿದೆ ಎಂದು ಕಬ್ಬು ಬೆಳೆಗಾರರ ಸಂಘದ ರಾಜ್ಯಾಧ್ಯಕ್ಷ ಹಳ್ಳಿಕೆರೆಹುಂಡಿ ಭಾಗ್ಯರಾಜ್ ಹೇಳಿದ್ದಾರೆ. ಚಾಮರಾಜನಗರದಲ್ಲಿ ಮಾತನಾಡಿದ ಅವರು, ರಾಜಕೀಯ ಕ್ಷೇತ್ರದಲ್ಲಿ ಮಹಿಳೆಯರಿಗೆ ಮೀಸಲಾತಿ ಮಹಾತ್ಮ ಗಾಂಧೀಜಿಯವರ ಕನಸಾಗಿದ್ದು ಈಗ ಅದು ಸಾಕಾರಗೊಳ್ಳುತ್ತಿದೆ. ಇದು ಪರಿಣಾಮಕಾರಿಯಾಗಿ ಅನುಷ್ಠಾನಗೊಳ್ಳಬೇಕು ಎಂದರು.

**ಧ್ವನಿ–ಹಳ್ಳಿಕೆರೆಹುಂಡಿ ಭಾಗ್ಯರಾಜ್ (34 ಸೆಕೆಂದುಗಳು)**

<><><>

**ಕೇಂದ್ರ ಸರ್ಕಾರದ ಮಹತ್ವಾಕಾಂಕ್ಷೆಯ 2027ರ** ಡಿಜಿಟಲ್ ಜನಗಣತಿ ಕಾರ್ಯಕ್ರಮವನ್ನು ಕೋಲಾರ ಜಿಲ್ಲೆಯಲ್ಲಿ ಯಶಸ್ವಿಗೊಳಿಸಲು ಸಜ್ಜಾಗಿರುವ ಜಿಲ್ಲಾಡಳಿತವು, ಗಣತಿದಾರರಿಗೆ ಎರಡನೇ ಹಂತದ ತರಬೇತಿಯನ್ನು ಆರಂಭಿಸಿದೆ. ಈ ಕುರಿತು ಮಾಹಿತಿ ನೀಡಿದ ಅಪರ ಜಿಲ್ಲಾಧಿಕಾರಿ ಎಸ್.ಎಂ.ಮಂಗಳ, ತಾಲ್ಲೂಕು ಮಟ್ಟದಲ್ಲಿ ಕಾರ್ಯನಿರ್ವಹಿಸುವ ಗಣತಿದಾರರಿಗೆ ತಾಂತ್ರಿಕ ನೈಪುಣ್ಯತೆ ನೀಡಲು ಅಂತಿಮ

ಹಂತದ ತರಬೇತಿ ನೀಡಲಾಗುತ್ತಿದೆ. ಡಿಜಿಟಲ್ ರೂಪದಲ್ಲಿ ಮಾಹಿತಿ ಸಂಗ್ರಹಿಸುವುದು ಈ ಬಾರಿಯ ವಿಶೇ ʼವಾಗಿದ್ದು, ಆ್ಯಪ್ ಬಳಕೆ ಮತ್ತು ದತ್ತಾಂಶ ನಮೂದಿಸುವ ಬಗ್ಗೆ ಶಿಕ್ಷಕರು ಹಾಗೂ ಅಂಗನವಾಡಿ ಕಾರ್ಯಕರ್ತೆಯರನ್ನು ಒಳಗೊಂಡ ತಂಡಕ್ಕೆ ತರಬೇತಿ ನೀಡಲಾಗುತ್ತಿದೆ ಎಂದು ತಿಳಿಸಿದರು.

<><><>

**ಬಾಗಲಕೋಟೆ ಜಿಲ್ಲೆಯ ಗ್ರಾಮ ಪಂಚಾಯತಿಗಳಲ್ಲಿ** 2025–26ನೇ ಸಾಲಿನ ತೆರಿಗೆ ಸಂಗ್ರಹಣೆಯಲ್ಲಿ ಪ್ರತಿಶತ 100 ರಷ್ಟು ಸಾಧನೆ ಮಾಡಿದ ಹಿನ್ನೆಲೆ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಶಶಿಧರ ಕುರೇರ ಅವರಿಗೆ ರಾಜ್ಯ ಸರ್ಕಾರದ ಮುಖ್ಯ ಕಾರ್ಯದರ್ಶಿಗಳಿಂದ ಪ್ರಶಂಸನಾ ಪತ್ರ ಲಭಿಸಿದೆ.

<><><>

**ಸಂಚಾರಿ ವೈದ್ಯಕೀಯ** ತಪಾಸಣಾ ವಾಹನದಿಂದ ಗ್ರಾಮೀಣ ಭಾಗದ ಜನರಿಗೆ ಅನುಕೂಲವಾಗಲಿದೆ. ಎಲ್ಲರೂ ಇದರ ಸದುಪಯೋಗ ಪಡೆಯಬೇಕು ಎಂದು ವಿಜಯನಗರ ಜಿಲ್ಲಾ ಪಂಚಾಯತ ಮುಖ್ಯ ಕಾರ್ಯನಿರ್ವಹಣಾಧಿಕಾರಿ ನೌಜಾಯ್ ಮಹಮ್ಮದ್ ಅಲಿ ಅಕ್ರಂ ಶಾ ತಿಳಿಸಿದ್ದಾರೆ. ಜಿಲ್ಲಾ ಪಂಚಾಯತ್ ಕಚೇರಿಯ ಆವರಣದಲ್ಲಿ ಆಯೋಜಿಸಲಾದ ಉಚಿತ 'ಸಂಚಾರಿ ಆರೋಗ್ಯ ಘಟಕ' ಕ್ಕೆ ಚಾಲನೆ ನೀಡಿ ಅವರು ಮಾತನಾಡಿದರು.

<><><>

**ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು.**
**ನಮ್ಮ ಮುಂದಿನ ರಾಷ್ಟ್ರೀಯ ವಾರ್ತಾ ಪ್ರಸಾರ 1 ಗಂಟೆ 10 ನಿಮಿಷಕ್ಕೆ**

<><><>